# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:— ಅಲ್ಪಸಂಖ್ಯಾತರ ನಿರ್ದೇಶನಾಲಯದ ಕಾರ್ಯಕ್ರಮಗಳನ್ನು ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳ ಮೂಲಕ ಅನುಷ್ಠಾನಗೊಳಿಸುವ ಬಗ್ಗೆ.

: : : :

ಓದಲಾಗಿದೆ:

೧. ಆದೇಶಸಂಖ್ಯೆ: ಸಕಇ ೧೧೪ ಬಿಇಟಿ ೯೮, ದಿನಾಂಕ: ೯-೧೨-೯೮

೨. ಸಂಖ್ಯೆ: ಅಸನಿ ವಿನಿ-೨೨: ೯೯-೨೦೦೦, ದಿನಾಂಕ: ೦೫-೦೭-೯೯, ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು.

: : : : :

ಪ್ರಸ್ತಾವನೆ:

ಮೇಲೆ ಓದಲಾದ ಉಲ್ಲೇಖ (೧)ರ ದಿನಾಂಕ: ೦೯-೧೨-೯೮ರ ಆದೇಶದಲ್ಲಿ ರಾಜ್ಯದಲ್ಲಿನ ಅಲ್ಪಸಂಖ್ಯಾತರ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಪ್ರತ್ಯೇಕವಾಗಿ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯವನ್ನು ಸ್ಥಾಪಿಸಲಾಗಿದೆ.

ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರುಗಳ ಮೇಲೆ ಓದಲಾದ ಉಲ್ಲೇಖ(೨)ರ ದಿನಾಂಕ: ೦೫-೦೭-೯೯ರಲ್ಲಿ ಪ್ರಸ್ತಾವನೆಯೊಂದನ್ನು ಸಲ್ಲಿಸಿ, ಅಲ್ಪಸಂಖ್ಯಾತರ ನಿರ್ದೇಶನಾಲಯವು ೧೯೯೯-೨೦೦೦ನೇ ಸಾಲಿನಿಂದ ಕಾರ್ಯಾರಂಭ ಮಾಡಿರುತ್ತದೆ. ಹೊಸದಾಗಿ ಮಂಜೂರಾಗಿರುವ ಅಲ್ಪಸಂಖ್ಯಾತರ ನಿರ್ದೇಶನಾಲಯದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಅಲ್ಪಸಂಖ್ಯಾತರ ಇಲಾಖೆಯ ಪ್ರತ್ಯೇಕವಾದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಇರುವುದಿಲ್ಲ. ಆದ್ದರಿಂದ ಅಲ್ಪಸಂಖ್ಯಾತರ ನಿರ್ದೇಶನಾಲಯದ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಅನುಷ್ಠಾನ ಗೊಳಿಸಲು, ಆಯಾ ಜಿಲ್ಲಾ ಹಿಂದುಳಿದವರ್ಗಗಳ ಅಧಿಕಾರಿಗಳನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಾಧಿಕಾರಿಗಳನ್ನಾಗಿ ಮಾಡಿ, ಸರ್ಕಾರದ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ. ಕಾರಣ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಸಕಇ ೧೪೭ ಬಿಇಟಿ ೯೯, ಬೆಂಗಳೂರು ದಿನಾಂಕ: ೦೭-೦೯-೯೯

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಅಲ್ಪಸಂಖ್ಯಾತರ ಇಲಾಖೆಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿ: ಸಿಬ್ಬಂದಿಯನ್ನು ಸೃಜಿಸುವವರೆವಿಗೂ ಅಲ್ಪಸಂಖ್ಯಾತರ ಇಲಾಖೆಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಾಗೂ ಇದಕ್ಕೆ ಸಂಬಂಧಿಸಿದ ಯೋಜನೆಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಅನುಷ್ಠಾನಾಧಿಕಾರಿಗಳನ್ನಾಗಿ ನೇಮಿಸಿ, ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

ಸಹಿ:
(ನ.ಲ. ನರಸಿಂಹನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ,

: : ನಕಲು : :

ನಿರ್ದೇಶಕರ ಪರವಾಗಿ,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.